



ಅರುಣ ಪಿ. ಭಟ್ಟ

# ವಾರಭವಿಷ್ಯ: 11.07.2024ದಿಂದ 17.07.2024ರವರೆಗೆ



**ಮೇಷ**

ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾದ ಪ್ರಗತಿ ಇದೆ. ಶೈಕ್ಷಣಿಕ ವಿಚಾರಗಳಲ್ಲಿ ನಿಮ್ಮ ಗಮನ ಚೆನ್ನಾಗಿರುತ್ತದೆ. ಆದಾಯ ಮೂಲದಿಂದ ಹೆಚ್ಚುವರಿಯಾಗಿ ಅನುಕೂಲ ಪಡೆಯಲಿದ್ದೀರಿ. ವೈಯಕ್ತಿಕ ಸಂಬಂಧಗಳು ಸುಮಧುರವಾಗಿ ಇರುತ್ತವೆ. ಇದರಿಂದ ನಿಮ್ಮ ಸಂತೋಷ ಹೆಚ್ಚಾಗಲಿದೆ. ನಕಾರಾತ್ಮಕ ನಿರ್ಧಾರಗಳನ್ನು ಸರಿಪಡಿಸಿಕೊಳ್ಳಲು ಯೋಚಿಸುತ್ತೀರಿ. ಶುಭದಿನ 09. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.



**ವೃಷಭ**

ಕೌಟುಂಬಿಕ ವಿಚಾರಗಳಲ್ಲಿ ಉತ್ತಮವಾದ ಪ್ರಗತಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುವಲ್ಲಿ ಸಫಲರಾಗುತ್ತೀರಿ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಆರಿಸಿಕೊಳ್ಳುವಲ್ಲಿ ನೀವು ಯಶಸ್ಸು ಪಡೆಯುತ್ತೀರಿ. ಮದುವೆ ಸಂಬಂಧಗಳನ್ನು ಹುಡುಕುತ್ತಿದ್ದಲ್ಲಿ ಅದರಲ್ಲಿ ಯಶಸ್ಸು ಕಾಣುವ ಅವಕಾಶ ಹೆಚ್ಚಾಗಿದೆ. ಶುಭದಿನ 12. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಸ್ತೋತ್ರ ಪಠಿಸಿರಿ.



**ಮಿಥುನ**

ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಹಳೆಯ ಸ್ನೇಹಿತರು ಸಾಲ ಕೇಳಿದರು ಎಂದು ತಕ್ಷಣ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಅನಿವಾರ್ಯವಾಗಿ ಜವಾಬ್ದಾರಿ ಬಂದರೆ ಎಚ್ಚರಿಕೆಯಿಂದ ನಿರ್ವಹಿಸಿ. ವಾಹನ ಚಾಲನೆ ಮಾಡುವಾಗ ಎಚ್ಚರ. ಪ್ರವಾಸ ಕೈಗೊಳ್ಳಲಿದ್ದೀರಿ. ಶುಭದಿನ 14. ಗಣೇಶ ಪಂಚರತ್ನ ಸ್ತೋತ್ರ ಪಠಣ ಮಾಡಿರಿ.



**ಕಟಕ**

ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್ ಪ್ರಕರಣ ಇದ್ದರೆ ಹೆಚ್ಚಿನ ಗಮನ ನೀಡಬೇಕು. ಇಲ್ಲದಿದ್ದಲ್ಲಿ ನಷ್ಟ ಅನುಭವಿಸಬೇಕಾಗುತ್ತದೆ. ಶುಭದಿನ 16. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.



**ಸಿಂಹ**

ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಕೆಲಸ– ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಆ ಮೂಲಕ ಅವರ ಮೆಚ್ಚುಗೆಯನ್ನು ಪಡೆಯುತ್ತೀರಿ. ಪರಿಣಾಮಕಾರಿ ಕಾರ್ಯ ಮೆಚ್ಚಿಕೊಳ್ಳುತ್ತಾರೆ. ಶುಭದಿನ 13. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.



**ಕನ್ಯಾ**

ಪುಣ್ಯಕ್ಷೇತ್ರಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 12. ಆದಿತ್ಯ ಹೃದಯ ಪಠಿಸಿರಿ.



**ತುಲಾ**

ಕುಟುಂಬ ಸದಸ್ಯರ ಜೊತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯ ಹೆಚ್ಚಲಿದೆ. ಶುಭದಿನ 15. ಚಂಡಿ ಪಾರಾಯಣ ಮಾಡಿರಿ.



**ವೃಶ್ಚಿಕ**

ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮುಗಿಸಿಕೊಳ್ಳಿ. ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಸಾಮಾಜಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಮುಖ್ಯವಾದ ಹುದ್ದೆಗೆ ನಿಮ್ಮ ಹೆಸರನ್ನು ಸೂಚಿಸುವ ಸಾಧ್ಯತೆ ಇದೆ. ಶುಭದಿನ 14. ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.



**ಧನಸ್ಸು**

ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಕುಟುಂಬ ಸದಸ್ಯರು ಹಾಗೂ ಸಂಬಂಧಿಕರ ಜೊತೆಗೆ ಸೌಹಾರ್ದಯುತವಾದ ಬಾಂಧವ್ಯ ಇರುತ್ತದೆ. ಶುಭದಿನ. 16. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.



**ಮಕರ**

ವಾರದ ಆರಂಭದಲ್ಲಿ ವೃತ್ತಿಪರರಿಗೆ ಮುಖ್ಯವಾದ ಅವಕಾಶಗಳು ಸಿಗುತ್ತವೆ. ದೊಡ್ಡ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಆಸೆ ಪೂರೈಸುತ್ತದೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗಬಹುದು. ಅಲರ್ಜಿ ಸಮಸ್ಯೆ ಇರುವವರು ಎಚ್ಚರಿಕೆಯಿಂದ ಇರಬೇಕು. ಸಂಗಾತಿ ಜೊತೆಗೆ ಸಂತಸದ ಸಮಯ ಕಳೆಯಲಿದ್ದೀರಿ. ಸಾಮಾಜಿಕ ಚಟುವಟಿಕೆಗಳ ಮಧ್ಯೆ ಗೊಂದಲ ಏರ್ಪಡಲಿದೆ. ಶುಭದಿನ 15. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.



**ಕುಂಭ**

ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಮಕ್ಕಳಿಂದ ನಿಮಗೆ ಶುಭ ಸುದ್ದಿ ಇದೆ. ಅವರಿಂದ ನೀವು ಹೆಮ್ಮೆ ಪಡುತ್ತೀರಿ. ವಿವಿಧ ಮೂಲಗಳಿಂದ ಸಂಪತ್ತು ಸಂಗ್ರಹ ಆಗುತ್ತದೆ. ವೈಯಕ್ತಿಕ ಸಂಬಂಧವು ಸೌಹಾರ್ದಯುತವಾಗಿ ಇರುತ್ತದೆ. ಪ್ರೀತಿಪಾತ್ರರಿಗೆ ಮತ್ತಷ್ಟು ಹತ್ತಿರವಾಗುತ್ತೀರಿ. ಶುಭದಿನ 17. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.



**ಮೀನ**

ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಆರೋಗ್ಯವು ಚೆನ್ನಾಗಿರುತ್ತದೆ. ಶುಭದಿನ 14. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಿಸಿರಿ.